# ಧೈರ್ಯದ ದಾರಿ

ನಿಮ್ಮ ನಂಬಿಕೆಯ ಧ್ವನಿ

EMAIL : dairyadadaari@gmail.com ಸಂಪುಟ: 01 ಸಂಚಿಕೆ: 190

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795

ಮಂಗಳವಾರ: 07–07–2026


## ಜನರು ಮತ ನೀಡುವ ಯೋಗ್ಯತೆಯನ್ನು ಯಾವೊಂದು ಪಕ್ಷಗಳು ಉಳಿಸಿಕೊಂಡಿಲ್ಲ: ಚೇತನ್ ಅಹಿಂಸಾ

ಧೈರ್ಯದ ದಾರಿ



**ಮಾನ್ವಿ:** ಪಟ್ಟಣದ ಪ್ರವಾಸಿ ಮಂದಿರದಲ್ಲಿ ಚಲನಚಿತ್ರ ನಟ ಹಾಗೂ ಸಾಮಾಜಿಕ ಹೋರಾಟಗಾರ ಚೇತನ್ ಅಹಿಂಸಾ ಸುದ್ದಿಗಾರರೊಂದಿಗೆ ಮಾತನಾಡಿ ಪ್ರತಿಯೊಬ್ಬರಲ್ಲಿ ಕೂಡ ಮತದಾನದ ಬಗ್ಗೆ ಜಾಗೃತಿ ಮೂಡಬೇಕು, ಪ್ರತಿ ಚುನಾವಣೆಯಲ್ಲಿ ಶೇ95 ರಷ್ಟು ಮತದಾನವಾಗಬೇಕು ಜನರು ಮತ ನೀಡುವ ಯೋಗ್ಯತೆಯನ್ನು ಯಾವೊಂದು ಪಕ್ಷಗಳು ಉಳಿಸಿಕೊಳ್ಳದೆ ಇರುವುದರಿಂದ ಇಂದು ಮತದಾನದ ಪ್ರಮಾಣ ಇಳಿಕೆಯಾಗುವುದಕ್ಕೆ ಕಾರಣವಾಗಿದೆ. ರಾಜ್ಯಾಧ್ಯಂತ ನಡೆಯುತ್ತಿರುವ ಎಸ್.ಐ.ಆರ್. ಪ್ರಕ್ರಿಯೆಯಲ್ಲಿ ಪ್ರತಿಯೊಬ್ಬ ಅರ್ಹ ಮತದಾರರು ಕೂಡ ಭಾಗವಹಿಸಿ ತಮ್ಮ ಮತದಾನದ ಹಕ್ಕನ್ನು ಉಳಿಸಿಕೊಳ್ಳಬೇಕು.

ಸಮಸಮಾಜದ ಕಡೆ ನಮ್ಮ ನಡೆ ಈ ಕುರಿತು ರಾಜ್ಯಾದ್ಯಂತ ಚರ್ಚೆ ಮಾಡಿಕೊಂಡು ಹೋಗುತ್ತಿದ್ದೇವೆ. ಚರ್ಚೆಯ ಮುಂದಿನ ರೂಪವಾಗಿ ಸಮಸಮಾಜವನ್ನು ಯಾವರೀತಿ ಕಾರ್ಯರೂಪಕ್ಕೆ ತರಬಹುದು ಎಂದು ರಾಜ್ಯಾಧ್ಯಂತ ಇರುವ ಅಭಿಮಾನಿಗಳನ್ನು,ಸಮಾಜಮುಖಿ ಚಿಂತಕರನ್ನು,ವಿದ್ಯಾರ್ಥಿಗಳನ್ನು, ಮಹಿಳೆಯರನ್ನು, ದಲಿತರನ್ನು ,ರೈತ, ಕಾರ್ಮಿಕರನ್ನು, ಬಹುಜನ ಹೋರಾಟಗಾರನ್ನು, ನಿಸ್ವಾರ್ಥವಾಗಿ ಜನರ ಏಳಿಗೆಗಾಗಿ ದುಡಿಯುತ್ತಿರುವವರೊಂದಿಗೆ ನಿರಂತರವಾಗಿ ಚರ್ಚೆನಡೆಸಿ ರಾಜ್ಯದಲ್ಲಿ ಡಾ.ಬಾಬಾಸಾಹೇಬ್ ಅಂಬೇಡ್ಕರ್ ರವರ ಸಂವಿಧಾನವನ್ನು ನಿಜವಾಗಿ ಕಾರ್ಯರೂಪಕ್ಕೆ ತರುವುದಕ್ಕೆ ,ಜನರಲ್ಲಿ ಪರಿವರ್ತನೆ ಮೂಡಿಸುವುದಕ್ಕೆ ರಾಜಕೀಯ ಶಕ್ತಿ ಅತ್ಯಂತ ಅವಶ್ಯವಾಗಿದೆ. ಭಾರತದ ಸಂವಿಧಾನದಡಿಯಲ್ಲಿ ವೈಜ್ಞಾನಿಕವಾದ,ಬಲಿಷ್ಟವಾದ ಸಮ ಸಮಾಜದ ಚಿಂತನೆಯುಳ್ಳ ನೂತನ ಪಕ್ಷವನ್ನು ಕಟ್ಟಲಾಗುವುದು. ರಾಜ್ಯದಲ್ಲಿ ಕಳೆದ 35 ವರ್ಷಗಳಿಂದ ಎಷ್ಟೇ ಹೋರಾಟ ನಡೆಸಿದರು ಕೂಡ ವಿದ್ಯಾರ್ಥಿಗಳಿಗೆ ,ಜನಸಾಮಾನ್ಯರಿಗೆ ನ್ಯಾಯವನ್ನು ಒದಗಿಸುವುದಕ್ಕೆ ಸಾಧ್ಯವಾಗುತ್ತಿಲ್ಲ. ನಮ್ಮಗೆ ಆಗಿರುವ ಅನ್ಯಾಯಗಳು ಮುಂದಿನ ಪೀಳಿಗೆಗೆ ಆಗಬಾರದು ಎನ್ನುವ ಉದ್ದೇಶದಿಂದ ಸೈದ್ಧಾಂತಿಕವಾದ ನೆಲ್ಲೆಗಟ್ಟಿನಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ,ಪೆರಿಯಾರ್, ಕಾನ್ಷಿರಾಂ, ಸತ್ಯಪಂತದ ಅಡಿಯಲ್ಲಿ ಕರ್ನಾಟಕದಲ್ಲಿ ಅದರ್ಶ ಸಮಾಜವನ್ನು ಕಟ್ಟುವ ಬರವಸೆ ಹೋರಾಟಗಾರರಿಂದ ದೊರೆತ್ತಿದೆ, ಯುವಕರು ಹೆಚ್ಚಿನ ಆಸಕ್ತಿಯನ್ನು ತೋರುತ್ತಿದ್ದಾರೆ ನಮ್ಮದು ಎಡಪಂಥವು ಅಲ್ಲ,ಬಲಪಂಥವುಅಲ್ಲ,ಮಧ್ಯಪಂತವು ಅಲ್ಲ ನಮ್ಮ ಗುರಿ ಸಮ ಸಮಾಜ ನಿರ್ಮಾಣವಾಗಿದೆ. ಉತ್ತರ ಕರ್ನಾಟಕ್ಕೆ ಸಿಗಬೇಕಾದ ಅದ್ಯತೆ ಸಿಗುವಂತೆ ಮಾಡಬೇಕಾಗಿದೆ. ಅಸಮಾನತೆ, ಅನ್ಯಾಯದ ವ್ಯವಸ್ಥೆಯನ್ನು ಕಿತ್ತು ಹಾಕುವುದಕ್ಕಾಗಿ 2028 ರಲ್ಲಿ ರಾಜ್ಯದಲ್ಲಿ ನಡೆಯುವ ವಿಧಾನಸಭಾ ಚುನಾವಣೆಯಲ್ಲಿ ನಮ್ಮ ಪಕ್ಷದಿಂದ ರಾಜ್ಯದಲ್ಲಿನ ಎಲ್ಲಾ 224 ವಿಧಾನಸಭಾ ಕ್ಷೇತ್ರಗಳಲ್ಲಿ ನಮ್ಮ ಪಕ್ಷದ ಅಭ್ಯಾರ್ಥಿಗಳು ಸ್ಪರ್ಧೆ ನಡೆಸಲಿದ್ದಾರೆ.

ರಾಜ್ಯದಲ್ಲಿ ಹಲವು ದಶಕಗಳಿಂದ ಬಡವರ,ದಿನದಲಿತರ, ವಿದ್ಯಾರ್ಥಿಗಳ,ಮಹಿಳೆಯರ ಹಕ್ಕುಗಳಿಗಾಗಿ ಹಾಗೂ ಸಮಸ್ಯೆಗಳಿಗೆ ನಿರಂತರವಾಗಿ ಹೋರಾಟಗಳು ನಡೆಸುತ್ತ ಬಂದಿದ್ದರು ಕೂಡ ರಾಜ್ಯ ಮತ್ತು ಕೇಂದ್ರ ಸರಕಾರಗಳ ದುರಾಡಳಿತದಿಂದಾಗಿ ಉದ್ಯೋಗದ ಅವಕಾಶ ಯುವಕರಿಗೆ ದೊರೆಯುತ್ತಿಲ್ಲ .ರಾಜ್ಯದಲ್ಲಿ ಸರಕಾರದಲ್ಲಿ ಸರಕಾರಿ ನೌಕಕರರಿಗೆ ಸಂಬಳವನ್ನು ನೀಡುವುದಕ್ಕೆ ಕೂಡ ದುಡ್ಡಿಲ್ಲದೆ ಇರುವಂತ ಪರಿಸ್ಥಿತಿ ರಾಜ್ಯದಲ್ಲಿ ಇದೆ ಇದುವರೆಗೂ ಸರಕಾರದಿಂದ ಯಾವುದೆ ನೇಮಕಾತಿಗಳು ನಡೆಯುತ್ತಿಲ್ಲ, ಮುಖ್ಯಮಂತ್ರಿಗಳು ಬಸ್‌ದರವನ್ನು ಹೆಚ್ಚಳಮಾಡುವುದಕ್ಕೆ ಮುಂದಾಗಿದ್ದಾರೆ. ಇದರಿಂದ ಮಾಧ್ಯಮವರ್ಗದವರಿಗೆ ಹಾಗೂ ಬಡವರಿಗೆ ಅತ್ಯಂತ ತೊಂದರೆಯಾಗುತ್ತದೆ . ರಾಜ್ಯ ಸರಕಾರ ಬಡವರ ಮೇಲೆ ಹೋರೆಯನ್ನು ಹಾಕುವುದನ್ನು ಬಿಟ್ಟು ಉಳ್ಳವರ ಮೇಲೆ ಶ್ರೀಮಂತರ ಮೇಲೆ ಹೆಚ್ಚಿನ ತೆರಿಗೆಯನ್ನು ಹಾಕುವ ಮೂಲಕ ರಾಜ್ಯದ ಬೊಕ್ಕಸದಲ್ಲಿರುವ 4 ಲಕ್ಷಕೋಟಿ ಹಣವನ್ನು ಹೆಚ್ಚಳಮಾಡಿಕೊಂಡು ಸಮಾಜದ ಅಭಿವೃದ್ಧಿಗೆ ವೆಚ್ಚಮಾಡಬೇ ಕಾಗಿದೆ ಇಂದಿನ ಸರಕಾರಗಳು ,ಶ್ರೀಮಂತರಿಗಾಗಿ ಮಾತ್ರ ಇವೇ ಜನರ ಸಮಸ್ಯೆಗಳಿಗೆ ಪ್ರಮಾಣಿಕವಾಗಿ ಸ್ಪಂದಿಸದೆ ಇರುವುದರಿಂದ ಜನರ ಸಮಸ್ಯೆಗಳು ಸಮಸ್ಯೆಗಳಾಗಿ ಉಳಿದುಕೊಂಡಿವೆ ಶ್ರೀಮಂತರ ಹತ್ತಿರವೇ,ರಾಜಕೀಯ ಶಕ್ತಿ ಇದೆ. ಭೂಮಿ ಇದೆ,ಶಿಕ್ಷಣ ಸಂಸ್ಥೆಗಳು ಇವೆ ಇದ್ದರಿಂದ ಬಡವರ ಅಭಿವೃದ್ಧಿ ಸಾಧ್ಯವಿಲ್ಲ ನಮ್ಮಗೆ ಬಡವರ ಪರವಿರುವ ಸಮ ಸಮಾಜದ ಪರವಾಗಿರುವ ರಾಜಕೀಯ ಪಕ್ಷದ ಅವಶ್ಯಕತೆ ಇದೆ. ರಾಜ್ಯದಲ್ಲಿ ಜನರ ಸಮಸ್ಯೆಗಳ ನಿವಾರಣೆಯಾಗಬೇಕಾದರೆ. ನಮ್ಮದೆ ಆದಂತಹ ರಾಜಕೀಯ ಪಕ್ಷ ಅಧಿಕಾರಕ್ಕೆ ಬಂದರೆ ಮಾತ್ರ ಸಾಧ್ಯ ಎಂದು ಸಮಾನಮನಸ್ಕರಾ ಅಭಿಪ್ರಾಯದಂತೆ ರಾಜ್ಯದಲ್ಲಿ ಹೊಸ ರಾಜಕೀಯ ಪಕ್ಷದ ನೊಂದಾಣಿ ಪ್ರಕ್ರಿಯೇ ವಾಗುತ್ತದೆ ಎನ್ನುವ ಉದ್ದೇಶದಿಂದ ಹಾಗೂ ರಾಜ್ಯಾದ್ಯಂತ ವಿವಿಧ ಕ್ಷೇತ್ರಗಳಿಗೆ ಪ್ರವಾಸ ಕೈಗೊಂಡ ಸಮಯದಲ್ಲಿ ಉತ್ತಮ ಪ್ರತಿಕ್ರಿಯೆ ದೊರೆಯುತ್ತಿದೆ. ಹುಬ್ಬಳಿಯಲ್ಲಿ ಜನವರಿ 2027 ರಂದು ನಡೆಯುವ ಬೃಹತ್ ಸಮಾವೇಶದಲ್ಲಿ ಪಕ್ಷದ ಹೆಸರು,ಚುನಾವಣೆ ಚಿಹ್ನೆ,ಧ್ವಜ,ಪ್ರಣಾಳಿಕೆಯನ್ನು ,ರಾಜ್ಯಸಮಿತಿ ಯನ್ನು ಅಧಿಕೃತವಾಗಿ ಘೋಷಣೆ ಮಾಡಲಾಗುವುದು ಎಂದು ತಿಳಿಸಿದರು. ಪ್ರಭುರಾಜಕೊಡ್ಲಿ, ಮಲ್ಲೇಶಮಚನೂರ್, ಹನುಮಂತಬ್ಯಾಗವಾಟ್, ಸುರೇಶ ಬೈಲ್ ಮರ್ಚೆಡ್, ಹನುನಂತಪ್ಪ ಸೀಕಲ್ ಸೇರಿದಂತೆ ಇನ್ನಿತರರು ಇದ್ದರು.

## ಸಿರವಾರ: ವಸತಿ ಶಾಲೆಗಳಲ್ಲಿ ಮೂಲ ಸೌಕರ್ಯಗಳ ಕೊರತೆ; ಪಠ್ಯಪುಸ್ತಕ, ಸಮವಸ್ತ್ರಕ್ಕಾಗಿ ವಿದ್ಯಾರ್ಥಿಗಳ ಪರದಾಟ

ಧೈರ್ಯದ ದಾರಿ



**ಸಿರವಾರ:** ರಾಯಚೂರು ಜಿಲ್ಲೆಯ ಸಿರವಾರ ತಾಲೂಕಿನಲ್ಲಿರುವ ವಿವಿಧ ವಸತಿ ಶಾಲೆಗಳಲ್ಲಿ ಮೂಲ ಸೌಕರ್ಯಗಳ ಕೊರತೆ ಎದ್ದು ಕಾಣುತ್ತಿದ್ದು, ವಿದ್ಯಾರ್ಥಿಗಳು ಸಂಕಷ್ಟಕ್ಕೆ ಸಿಲುಕಿದ್ದಾರೆ. ಶೈಕ್ಷಣಿಕ ವರ್ಷ ಆರಂಭವಾಗಿ ತಿಂಗಳು ಕಳೆದಿದ್ದರೂ, ಪಠ್ಯಪುಸ್ತಕ, ಸಮವಸ್ತ್ರ ಮತ್ತು ಸ್ವಚ್ಛತಾ ಕಿಟ್‌ಗಳನ್ನು ವಿತರಿಸದಿರುವುದು ಆಡಳಿತ ವ್ಯವಸ್ಥೆಯ ನಿರ್ಲಕ್ಷ್ಯಕ್ಕೆ ಹಿಡಿದ ಕೈಗನ್ನಡಿಯಾಗಿದೆ.

ತಾಲೂಕಿನ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ, ಶ್ರೀಮತಿ ಇಂದಿರಾ ಗಾಂಧಿ ವಸತಿ ಶಾಲೆ ಹಾಗೂ ಮೌಲಾನಾ ಆಜಾದ್ ವಸತಿ ಶಾಲೆಗಳಲ್ಲಿ ಈ ಸಮಸ್ಯೆ ತಲೆದೋರಿದ್ದು, ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ತೀವ್ರ ಅಡಚಣೆಯಾಗಿದೆ.

**ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಕನ್ನಡ ಸೇನೆಯ ಆಕ್ರೋಶ**

ಈ ಕುರಿತು ತೀವ್ರ ಅಸಮಾಧಾನ ವ್ಯಕ್ತಪಡಿಸಿರುವ ಕನ್ನಡ ಸೇನೆ ಕರ್ನಾಟಕದ ಸಿರವಾರ ತಾಲೂಕು ಅಧ್ಯಕ್ಷ ಮೌನೇಶ ಪಿತಗಲ್, ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಹರಿಹಾಯ್ದಿದ್ದಾರೆ.

"ಶಾಲಾ ಆರಂಭವಾಗಿ ಒಂದು ತಿಂಗಳು ಕಳೆದರೂ ಅವಶ್ಯಕ ಪಠ್ಯಪುಸ್ತಕಗಳೇ ಇಲ್ಲದಿದ್ದರೆ ವಿದ್ಯಾರ್ಥಿಗಳು ಪಾಠ ಕಲಿಯುವುದು ಹೇಗೆ? ಅಧಿಕಾರಿಗಳ ಈ ಬೇಜವಾಬ್ದಾರಿಯಿಂದಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯ ಅತಂತ್ರವಾಗಿದೆ," ಎಂದು ಅವರು ಕಿಡಿಕಾರಿದ್ದಾರೆ.

**ತಕ್ಷಣ ಕ್ರಮಕ್ಕೆ ಆಗ್ರಹ:** ಕೂಡಲೇ ಎಚ್ಚೆತ್ತುಕೊಂಡಿರುವ ಇಲಾಖೆಯು, ಈ ಎಲ್ಲಾ ವಸತಿ ಶಾಲೆಗಳಿಗೆ ತುರ್ತಾಗಿ ಪಠ್ಯಪುಸ್ತಕ, ಸಮವಸ್ತ್ರ ಮತ್ತು ಸ್ವಚ್ಛತಾ ಕಿಟ್‌ಗಳನ್ನು ವಿತರಿಸಬೇಕೆಂದು ಮೌನೇಶ ಪಿತಗಲ್ ಆಗ್ರಹಿಸಿದ್ದಾರೆ.

ಎಚ್ಚರಿಕೆ: "ಒಂದು ವೇಳೆ ಇದೇ ಪರಿಸ್ಥಿತಿ ಮುಂದುವರಿದರೆ ಮತ್ತು ವಿದ್ಯಾರ್ಥಿಗಳ ಶೈಕ್ಷಣಿಕ ಹಿನ್ನಡೆಗೆ ಕಾರಣರಾದರೆ, ಮುಂದಿನ ದಿನಗಳಲ್ಲಿ ಉಂಟಾಗುವ ಪರಿಣಾಮಗಳಿಗೆ ನೇರವಾಗಿ ಅಧಿಕಾರಿಗಳೇ ಹೊಣೆಗಾರರಾಗುತ್ತಾರೆ," ಎಂದು ಅವರು ಎಚ್ಚರಿಕೆ ನೀಡಿದ್ದಾರೆ. ಜಿಲ್ಲಾ ಮಟ್ಟದ ಉನ್ನತ ಅಧಿಕಾರಿಗಳು ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ, ಕೂಡಲೇ ಪರಿಹಾರ ಒದಗಿಸಬೇಕೆಂದು ಸಾರ್ವಜನಿಕ ವಲಯದಲ್ಲಿ ಒತ್ತಾಯ ಕೇಳಿಬಂದಿದೆ.

## ಜಿ.ಪಂ ಜಲ ನಿರ್ಮಲ ಸಭಾ ಭವನದಲ್ಲಿ ಎಸ್.ಐ.ಆರ್ ಜಾಗೃತಿ ಕಾರ್ಯಕ್ರಮ



ಧೈರ್ಯದ ದಾರಿ

**ರಾಯಚೂರು ಜುಲೈ 06:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸ್ವೀಪಿ ಸಮಿತಿ ಇವರುಗಳ ಸಂಯುಕ್ತ ಆಶ್ರಯದಲ್ಲಿ ಸ್ವ–ಸಹಾಯ ಗುಂಪಿನ (ಎನ್‌ಆರ್‌ಎಲ್‌ಎಮ್) ಮಹಿಳೆರಿಗಾಗಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಜಾಗೃತಿ ಕಾರ್ಯಕ್ರಮ ಜಿಲ್ಲಾ ಪಂಚಾಯತ್ ಜಲ ನಿರ್ಮಲ ಸಭಾ ಭವನದಲ್ಲಿ ಜರುಗಿತು. ಪಂಚಾಯತ್ ರಾಜ್ ಇಲಾಖೆಯ ಸಹಾಯಕ ನಿರ್ದೇಶಕರಾದ ಅಣ್ಣಾ ರಾವ್ ಅವರು ಮಾತನಾಡಿ, ಪ್ರಜಾಪ್ರಭುತ್ವದಲ್ಲಿ ಮತದಾನ ಬಹಳ ಮಹತ್ವದ್ದ ದಿನ. ಅರ್ಹ ಮತದಾರರ ಹೆಸರು ಕಡ್ಡಾಯವಾಗಿ ಮತದಾರರ ಪಟ್ಟಿಯಲ್ಲಿ ಸೇರಬೇಕು. ಭಾರತ ಚುನಾವಣೆ ನಿರ್ದೇಶನದಂತೆ ಜಿಲ್ಲೆಯಲ್ಲಿ ಎಸ್‌ಐಆರ್ ನಡೆಯುತ್ತಿದ್ದು, ಅರ್ಹ ಮತದಾರರ ಪಟ್ಟಿಯನ್ನು ತಯಾರಿಸುವುದೇ ಇದರ ಪ್ರಮುಖ ಉದ್ದೇಶವಾಗಿದೆ ಎಂದರು.

ಈಗಾಗಲೇ ಬಿಎಲ್‌ಓ ಅವರು ಪ್ರತಿಯೊಂದು ಮನೆಗೆ ಹೋಗಿ ನಮೂನೆಗಳನ್ನು ವಿತರಣೆ ಮಾಡುತ್ತಿದ್ದಾರೆ. ದಯವಿಟ್ಟು ಅದನ್ನ ಸರಿಯಾಗಿ ಭರ್ತಿ ಮಾಡಿ ಬಿಎಲ್‌ಓ ಕೊಟ್ಟು ಸ್ವೀಕೃತಿ ತೆಗೆದುಕೊಳ್ಳಬೇಕು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ತಾಲೂಕು ಪಂಚಾಯತ್, ಜಿಲ್ಲಾ ಪಂಚಾಯತಿಯ ಹಾಗೂ ವಿವಿಧ ಸ್ವ–ಸಹಾಯ ಗುಂಪಿನ ಮಹಿಳಾ ಸದಸ್ಯರು ಉಪಸ್ಥಿತರಿದ್ದರು.

## ಎಸ್‌ಐಆರ್ ಪ್ರಕ್ರಿಯಲ್ಲಿ ಶೇ.71.15ರಷ್ಟು ಪ್ರಗತಿ: ಜಿಲ್ಲಾ ಚುನಾವಣಾಧಿಕಾರಿ ಪೂವಿತಾ

ಧೈರ್ಯದ ದಾರಿ



**ರಾಯಚೂರು ಜುಲೈ 06:** ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯ (ಎಸ್‌ಐಆರ್) ಭಾಗವಾಗಿ ಜುಲೈ 05ರ ಭಾನುವಾರ ಸಂಜೆ ವೇಳೆಗೆ ಜಿಲ್ಲಾದ್ಯಂತ ಇವರೆಗೆ 12,19,859 ಲಕ್ಷ ಮತದಾರರ ಗಣತಿ ನಮೂನೆಯನ್ನು ವಿತರಿಸಲಾಗಿದೆ. ಜಿಲ್ಲೆಯಲ್ಲಿ ಒಟ್ಟು 17,14,559 ಮತದಾರರ ಪೈಕಿ ಈವರೆಗೆ ಶೇ.71.15ರಷ್ಟು ಪ್ರಗತಿ ಸಾಧಿಸಲಾಗಿದೆ. ಜಿಲ್ಲೆಯಲ್ಲಿ ಈವರೆಗೆ ವಿತರಿಸಲಾದ ಗಣತಿ ನಮೂನೆಗಳ ಪೈಕಿ 2.38 ಲಕ್ಷ ಮತದಾರರ ನಮೂನೆಗಳನ್ನು ಡಿಜಿಟಲೀಕರಿಸಲು ಸಾಧ್ಯವಾಗಿದೆ. 1051 ಮತದಾರರು ಈವರೆಗೆ ಆನ್‌ಲೈನ್ ಮೂಲಕ ಗಣತಿ ನಮೂನೆಗಳನ್ನು ಭರ್ತಿ ಮಾಡಿದ್ದಾರೆ. ಸ್ಥಳದಲ್ಲಿ ಇಲ್ಲದ, ಬೇರೆ ವಿಳಾಸಕ್ಕೆ ಸ್ಥಳಾಂತರವಾದ, ಮೃತಪಟ್ಟ ಮತ್ತು ಎರಡು ಕಡೆ ನೋಂದಣಿಯಾದ ಒಟ್ಟು 3009 ಮತದಾರರ ವಿವರ ಲಭ್ಯವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಹಾರ ಇಲಾಖೆಯಿಂದ ಜುಲೈ ಮಾಹೆಯ ಪಡಿತರ ಧಾನ್ಯ ವಿತರಣೆ

ಧೈರ್ಯದ ದಾರಿ




**ರಾಯಚೂರು ಜುಲೈ 06 :** ರಾಯಚೂರಿನ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ 2026ರ ಜುಲೈ ಮಾಹೆಗೆ ಪಡಿತರ ಧಾನ್ಯಗಳನ್ನು ವಿತರಣೆ ಮಾಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ತಿಳಿಸಿದ್ದಾರೆ.

ರಾಯಚೂರು ಜಿಲ್ಲೆಯ ಕೇಂದ್ರ ವ್ಯಾಪ್ತಿಯ ಪ್ರತಿ ಅಂತ್ಯೋದಯ(ಎಎವೈ) ಪಡಿತರ ಚೀಟಿಗೆ 14 ಕೆ.ಜಿ ಅಕ್ಕಿ ಮತ್ತು 21 ಕೆ.ಜಿ ಜೋಳ ಹಾಗೂ ಕೇಂದ್ರ ವ್ಯಾಪ್ತಿಯ ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 02 ಕೆ.ಜಿ ಅಕ್ಕಿ ಮತ್ತು 03 ಕೆ.ಜಿ ಜೋಳ ಹಾಗೂ ರಾಜ್ಯ ವ್ಯಾಪ್ತಿಯ ಪಡಿತರ ಚೀಟಿದಾರರಿಗೆ 05 ಕೆ.ಜಿ ಅಕ್ಕಿ ಇದರ ಜೊತೆಗೆ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿಯಲ್ಲಿ ಸರ್ಕಾರದ ಮಾರ್ಗಸೂಚಿಯಂತೆ ಏಕ ಸದಸ್ಯ, ದ್ವಿ–ಸದಸ್ಯ ಮತ್ತು ತ್ರಿ–ಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಕೇಂದ್ರ ಹಾಗೂ ರಾಜ್ಯ ವ್ಯಾಪ್ತಿಯ ಅಂತ್ಯೋದಯ (ಎಎವೈ) ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು.

ಒಂದು ರಾಷ್ಟ್ರ ಒಂದು ಪಡಿತರ ಚೀಟಿ (ಅಂತರ್ ರಾಜ್ಯ/ ಅಂತರ್ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ರಾಜ್ಯದ ಪಡಿತರ ಚೀಟಿದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ದೂರವಾಣಿ ಸಂಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಶೀಲ್ದಾರರ ಕಛೇರಿಗೆ ಅಥವಾ ಜಿಲ್ಲೆಯ ಉಪನಿರ್ದೇಶಕರ ಕಛೇರಿಗೆ ದೂರನ್ನು ಸಲ್ಲಿಸಬಹುದಾಗಿದೆ.

ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಈ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತುಗೊಳಿಸಲಾವುದೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಾ.ಬಾಬು ಜಗಜೀವನ ರಾಮ್ ಪುಣ್ಯತಿಥಿ: ವಿವಿಧ ಗಣ್ಯರಿಂದ ಮಾಲಾರ್ಪಣೆ



ಧೈರ್ಯದ ದಾರಿ

**ರಾಯಚೂರು ಜುಲೈ 06:** ರಾಯಚೂರಿನಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಭಾರತದ ಮಾಜಿ ಉಪ ಪ್ರಧಾನಿ, ಹಸಿರು ಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನ ರಾಮ್ ಅವರ 40ನೇ ಪುಣ್ಯತಿಥಿ ಅಂಗವಾಗಿ ನಗರದ ರೈಲ್ವೆ ನಿಲ್ದಾಣದ ಬಳಿ ಇರುವ ಡಾ. ಬಾಬು ಜಗಜೀವನ ರಾಮ್ ಅವರ ಪುತ್ಥಳಿಗೆ ರಾಯಚೂರು ನಗರ ಕ್ಷೇತ್ರದ ಶಾಸಕ ಡಾ.ಶಿವರಾಜ ಎಸ್.ಪಾಟೀಲ್, ಜಿಲ್ಲಾಧಿಕಾರಿ ಪೂವಿತಾ ಎಸ್., ಜಿ.ಪಂ ಸಿಇಓ ಈಶ್ವರ ಕುಮಾರ್ ಕಾಂದೂ, ಎಸ್ಪಿ ಅರುಣಾಂಗ್ಶು ಗಿರಿ, ಪಾಲಿಕೆ ಆಯುಕ್ತ ಜುಬಿನ್ ಮೊಹಪಾತ್ರ ಸಮಾಜ ಕಲ್ಯಾಣ ಇಲಾಖೆಯ ಪ್ರಭಾರ ಉಪ ನಿರ್ದೇಶಕ ಪ್ರವೀಣ್ ಸೇರಿದಂತೆ ಹಲವು ಗಣ್ಯರು, ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ವಿವಿಧ ಸಂಘ–ಸಂಸ್ಥೆಯ ಮುಖಂಡರು, ಸಮಾಜದವರು ಪೂಜೆ ಸಲ್ಲಿಸಿ, ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.

# ಮಾನ್ವಿ ಹೆಡ್ ಕಾನ್ಸ್ಟೆಬಲ್ ಇಸ್ಮಾಯಿಲ್ ನಿಧನ : ಸರ್ಕಾರಿ ಗೌರವದೊಂದಿಗೆ ಅಂತ್ಯಕ್ರಿಯೆ



ಧೈರ್ಯದ ದಾರಿ

**ಮಾನ್ವಿ –:** ಮಾನ್ವಿ ಪೊಲೀಸ್ ಠಾಣೆಯ ಹೆಡ್ ಕಾನ್ಸ್ಟೆಬಲ್ (ಜಮೇದಾರ್) ಇಸ್ಮಯಿಲ್ (43) ಅವರು ಅನಾರೋಗ್ಯದ ಹಿನ್ನೆಲೆಯಲ್ಲಿ ಭಾನುವಾರ ಬೆಳಿಗ್ಗೆ ನಿಧನರಾಗಿದ್ದು, ಸಂಜೆ ಸರ್ಕಾರಿ ಗೌರವದೊಂದಿಗೆ ಅಂತ್ಯಕ್ರಿಯೆ ನೆರವೇರಿಸಲಾಯಿತು.

ಕೆಲವು ದಿನಗಳ ಹಿಂದೆ ಮಾನ್ವಿ ಪಟ್ಟಣದಲ್ಲಿ ನಡೆದ ಅಪಘಾತದಲ್ಲಿ ಗಂಭೀರವಾಗಿ ಗಾಯಗೊಂಡಿದ್ದ ಅವರು ಕೋಮಾ ಸ್ಥಿತಿಗೆ ತಲುಪಿದ್ದರು. ಬಳಿಕ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದ ಅವರು, ನಂತರ ರಾಯಚೂರಿನ ಖಾಸಗಿ ಆಸ್ಪತ್ರೆಯಲ್ಲಿಯೂ ಚಿಕಿತ್ಸೆ ಮುಂದುವರಿಸಿದ್ದರು. ಆರೋಗ್ಯದಲ್ಲಿ ಸ್ವಲ್ಪ ಚೇತರಿಕೆ ಕಂಡು ಮಾನ್ವಿಗೆ ಮರಳಿದ್ದರೂ, ಭಾನುವಾರ ತಮ್ಮ ನಿವಾಸದಲ್ಲೇ ಕೊನೆಯುಸಿರೆಳೆದಿದ್ದಾರೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೃತರು ಪತ್ನಿ, ಇಬ್ಬರು ಪುತ್ರಿಯರು ಹಾಗೂ ಒಬ್ಬ ಪುತ್ರನನ್ನು ಅಗಲಿದ್ದಾರೆ. ಮಾನ್ವಿಯ ಹುದಾ ಮಸೀದಿಯಲ್ಲಿ ಅವರ ಅಂತ್ಯಸಂಸ್ಕಾರ ನೆರವೇರಿತು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಸ್ಲ ಗಿರಿ ಅವರು ಪೊಲೀಸ್ ಇಲಾಖೆಯ ಪರವಾಗಿ ಸರ್ಕಾರಿ ಗೌರವ ಸಲ್ಲಿಸಿದರು. ಶಾಸಕ ಹಂಪಯ್ಯ ನಾಯಕ ಅವರು ಮೃತರ ಕುಟುಂಬಕ್ಕೆ ಭೇಟಿ ನೀಡಿ ಸಂತಾಪ ಸೂಚಿಸಿದರು.

ಸಿಂಧನೂರು ಗ್ರಾಮೀಣ ಡಿ.ವೈ.ಎಸ್.ಪಿ. ಚಂದ್ರಶೇಖರ್, ಮಾನ್ವಿ ಪಿ.ಐ. ಸೋಮಶೇಖರ್ ಎಸ್.ಕೆಂಚ ರೆಡ್ಡಿ, ಮೃತರ ಸಹೋದರ ಹಾಗೂ ಪುರಸಭೆಯ ಮಾಜಿ ಸದಸ್ಯರಾದ ಮೌಲಾನ ಫರೀದ್ ಉಮ್ಮಿ, ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಕೆ. ಅಮರೇಶಪ್ಪ ವಕೀಲರು, ರಾಜ ಸುಭಾಶ್ಚಂದ್ರ ನಾಯಕ್, ಹೆಚ್.ಬಿ.ಎಂ ಬಾಷಾ, ಮಮ್ಮದ್ ಜಾವೀದ್, ಸತ್ತಾರ್ ಬಂಗ್ಲೆವಾಲೆ, ಮಾನ್ವಿ ಪೊಲೀಸ್ ಠಾಣೆಯ ಸಿಬ್ಬಂದಿ ವರ್ಗದವರು ಇದ್ದರು.

# ಎಸ್.ಆಯ್.ಆರ್ ಅಭಿಯಾನದಲ್ಲಿ ಸಾರ್ವಜನಿಕರು ಭಾಗವಹಿಸಿ ಡಾ. ಬೆಲ್ದಾಳೆ



**ಬೀದರ್: ಜು.6:**ಮತದಾನದ ಹಕ್ಕು ಪ್ರತಿಯೊಬ್ಬ ಭಾರತೀಯ ಪ್ರಜೆಯ ಅಮೂಲ್ಯ ಸಾಂವಿಧಾನಿಕ ಹಕ್ಕಾಗಿದೆ. ಈ ಹಕ್ಕಿನ ಸಂರಕ್ಷಣೆ ಹಾಗೂ ಮತದಾರರ ಪಟ್ಟಿಯನ್ನು ನಿಖರವಾಗಿ ನಿರ್ವಹಿಸುವ ಉದ್ದೇಶದಿಂದ ಚುನಾವಣಾ ಆಯೋಗವು ಕೈಗೊಂಡಿರುವ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (Special Intensive Revision SIR) ಅಭಿಯಾನದಲ್ಲಿ ಪ್ರತಿಯೊಬ್ಬ ಅರ್ಹ ಮತದಾರರು ಸಕ್ರಿಯವಾಗಿ ಭಾಗವಹಿಸಬೇಕು ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕರು ಹಾಗೂ ಬಿಜೆಪಿ ರಾಜ್ಯ ಕಾರ್ಯದರ್ಶಿಗಳಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಕರೆ ನೀಡಿದರು.

ಬೀದರ್ ದಕ್ಷಿಣ ಕ್ಷೇತ್ರದ ಚಿಟ್ಟಾ ವಾಡಿ ಗ್ರಾಮದ 61ನೇ ಮತಗಟ್ಟೆಯಲ್ಲಿರುವ ತಮ್ಮ ನಿವಾಸದ ಗೃಹ ಕಚೇರಿಯಲ್ಲಿ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಈ ಅಭಿಯಾನದಡಿ ಮತದಾರರ ಪಟ್ಟಿಯಲ್ಲಿರುವ ಹೆಸರು, ವಿಳಾಸ, ವಯಸ್ಸು ಸೇರಿದಂತೆ ಇತರೆ ವಿವರಗಳನ್ನು ಪರಿಶೀಲಿಸಿ, ಅಗತ್ಯವಿದ್ದಲ್ಲಿ ತಿದ್ದುಪಡಿ ಮಾಡಿಸಿಕೊಳ್ಳಲು ಹಾಗೂ ಅರ್ಹ ಹೊಸ ಮತದಾರರು ಹೆಸರು ನೋಂದಾಯಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಮತದಾರರ ಪಟ್ಟಿಯಲ್ಲಿರುವ ದೋಷಗಳನ್ನು ಸರಿಪಡಿಸಿ, ನಿಖರ ಹಾಗೂ ವಿಶ್ವಾಸಾರ್ಹ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವುದೇ ಈ ಅಭಿಯಾನದ ಪ್ರಮುಖ ಉದ್ದೇಶವಾಗಿದೆ ಎಂದು ಅವರು ತಿಳಿಸಿದರು.

"ನಾನು ಸಹ ಈ ಅಭಿಯಾನದಲ್ಲಿ ಭಾಗವಹಿಸಿ ಅಗತ್ಯ ಪ್ರಕ್ರಿಯೆಯನ್ನು ಪೂರ್ಣಗೊಳಿಸಿದ್ದೇನೆ. ಪ್ರತಿಯೊಬ್ಬ ಅರ್ಹ ಮತದಾರರು ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಸರಿಯಾಗಿದೆಯೇ ಎಂಬುದನ್ನು ಪರಿಶೀಲಿಸಿ, ಅಗತ್ಯವಿದ್ದಲ್ಲಿ ತಿದ್ದುಪಡಿ ಮಾಡಿಸಿಕೊಳ್ಳಬೇಕು. ಹೊಸದಾಗಿ ಅರ್ಹತೆ ಪಡೆದವರು ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳುವ ಮೂಲಕ ಈ ಅಭಿಯಾನದ ಸದುಪಯೋಗ ಪಡೆದುಕೊಳ್ಳಬೇಕು," ಎಂದು ಅವರು ಮನವಿ ಮಾಡಿದರು.

ಪ್ರಜಾಪ್ರಭುತ್ವದ ಯಶಸ್ಸಿಗೆ ಶುದ್ಧ, ನಿಖರ ಮತ್ತು ಪಾರದರ್ಶಕ ಮತದಾರರ ಪಟ್ಟಿ ಅತ್ಯಂತ ಅವಶ್ಯಕವಾಗಿದೆ. ಆದ್ದರಿಂದ ಸಾರ್ವಜನಿಕರು ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಖಖಖ) ಅಭಿಯಾನದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ತಮ್ಮ ಮತದಾನದ ಹಕ್ಕನ್ನು ಸಂರಕ್ಷಿಸುವ ಜೊತೆಗೆ ಪ್ರಜಾಪ್ರಭುತ್ವವನ್ನು ಮತ್ತಷ್ಟು ಬಲಪಡಿಸುವ ಕಾರ್ಯದಲ್ಲಿ ಕೈಜೋಡಿಸಬೇಕೆಂದು ಡಾ. ಶೈಲೇಂದ್ರ ಬೆಲ್ದಾಳೆ ಅವರು ಕರೆ ನೀಡಿದರು.

ಈ ವೇಳೆ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (SIR) ಅಭಿಯಾನದ ಸಂದರ್ಭದಲ್ಲಿ ಅಧಿಕಾರಿಗಳು ಮತದಾರರ ಪಟ್ಟಿ ಪರಿಷ್ಕರಣೆಯ ಅರ್ಜಿಯನ್ನು (ಫಾರ್ಮ್) ಶಾಸಕರಿಗೆ ನೀಡಿದರು. ಬಳಿಕ ಅಗತ್ಯ ವಿವರಗಳನ್ನು ಭರ್ತಿ ಮಾಡಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಯಿತು.

ಈ ಸಂದರ್ಭದಲ್ಲಿ ಬೀದರ್ ತಹಶೀಲ್ದಾರ ರವೀಂದ್ರ ದಾಮಾ, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಉಪ ನಿರ್ದೇಶಕರಾದ ಪ್ರವೀಣ, ಕಂದಾಯ ನಿರೀಕ್ಷಕರಾದ ಬಾಲಾಜಿ, ಗ್ರಾಮ ಆಡಳಿತ ಅಧಿಕಾರಿ ಪ್ರದೀಪ್ ಅಂಗಡಿ ಬಿಎಲ್ಒ ಇದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ಅಬಕಾರಿ ಸನ್ನದುಗಳ ಹಂಚಿಕೆ ಕುರಿತು ಜುಲೈ 10 ರಂದು ಕೊಪ್ಪಳದಲ್ಲಿ ಇ-ಹರಾಜು ಪ್ರಕ್ರಿಯೆ

**ರಾಯಚೂರು ಜುಲೈ 06:** ಅಬಕಾರಿ ಇಲಾಖೆಯ ಮಹತ್ವಾಕಾಂಕ್ಷೆ ಕಾರ್ಯಕ್ರಮವಾದ ರಾಜ್ಯದಲ್ಲಿ ಸ್ಥಗಿತಗೊಂಡಿರುವ ಒಟ್ಟು 483 ಸಿಎಲ್-2ಎ ಮತ್ತು 96 ಸಿಎಲ್-ಎ ಸನ್ನದುಗಳನ್ನು ಸರ್ಕಾರವು ಇ-ಹರಾಜು ಮೂಲಕ ವಿಲೇವಾರಿ ಮಾಡಲು ಉದ್ದೇಶಿಸಲಾಗಿದೆ. ರಾಯಚೂರು ಜಿಲ್ಲೆಗೆ ಒಟ್ಟು 08 ಸಿಎಲ್-2ಎ ಮತ್ತು 01 ಸಿಎಲ್-ಎ ಸನ್ನದುಗಳನ್ನು ಹಂಚಿಕೆ ಮಾಡಲು ಇ-ಹರಾಜು ಪ್ರಕ್ರಿಯೆಯನ್ನು ಕೊಪ್ಪಳ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜುಲೈ 10ರ ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದ್ದು, ರಾಯಚೂರಿನ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕೋರಲಾಗಿದೆ.

ಹಂಚಿಕೆ ಮಾಡಿರುವ ಸನ್ನದುಗಳನ್ನು ಹೇಗೆ ಯಾವ ರೀತಿಯಲ್ಲಿ ಇ-ಹರಾಜು ಪ್ರಕ್ರಿಯೆ ಮೂಲಕ ವಿಲೇವಾರಿ ಮಾಡಲಾಗುತ್ತದೆ ಎಂಬುದನ್ನು ತಿಳಿಸಿ ಕೊಡಲು ಕೇಂದ್ರ ಸರ್ಕಾರದ ಸಂಸ್ಥೆಯಾದ ಎಮ್ಎಸ್ಟಿಸಿ ಸಂಸ್ಥೆಯ ತಂತ್ರಜ್ಞರು ಇ-ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಲು ಇಚ್ಛಿಸುವ ಸಾರ್ವಜನಿಕರಿಗೆ ತರಬೇತಿ ಮೂಲಕ ತಿಳಿಸಿ ಕೊಡಲಿದ್ದಾರೆ.

ಈ ತರಬೇತಿ ಕಾರ್ಯಕ್ರಮವನ್ನು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲಗೊಂಡು ತರಬೇತಿ ಪ್ರಯೋಜನೆ ಪಡೆದುಕೊಳ್ಳಬೇಕೆಂದು ರಾಯಚೂರಿನ ಅಬಕಾರಿ ಇಲಾಖೆಯ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆರೋಗ್ಯ ಇಲಾಖೆಯಿಂದ ವಿವಿಧ ಹುದ್ದೆಗಳ ಭರ್ತಿಗೆ ಅರ್ಜಿ ಆಹ್ವಾನ

**ರಾಯಚೂರು ಜುಲೈ 06:** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಜಿಲ್ಲೆಯ ಅಧೀನದಲ್ಲಿ ಖಾಲಿ ಇರುವ ಫಾರ್ಮಸಿ ಅಧಿಕಾರಿಗಳು ಮತ್ತು ಕಿರಿಯ ವೈದ್ಯಕೀಯ ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧಾರ ಮೇಲೆ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಫಾರ್ಮಸಿ ಅಧಿಕಾರಿಗಳು 8 ಹುದ್ದೆಗಳು, ಕಿರಿಯ ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿಗಳು 19 ಹುದ್ದೆಗಳಿಗೆ ಆಸಕ್ತರಿಂದ ರಾಯಚೂರಿನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯಲ್ಲಿ ದಿನಾಂಕ: 08-07-2026 ರಿಂದ 15-07-2026ರವರೆಗೆ ಬೆಳಿಗ್ಗೆ 10.30ಗಂಟೆಯಿಂದ ಸಾಯಂಕಾಲ 5.30ಗಂಟೆಯವರೆಗೆ ನಡೆಯುವ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ.

ಗರಿಷ್ಠ 45 ವಯೋಮತಿ ವರ್ಷದ ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಗೆ ಅನುಸರಿಸಿದಂತೆ ಫಾರ್ಮಸಿ ಅಭ್ಯರ್ಥಿಗಳು ಡಿ.ಫಾರ್ಮಾ ವಿದ್ಯಾರ್ಹತೆಯನ್ನು ಕರ್ನಾಟಕ ಸರ್ಕಾರದಿಂದ ಮಾನ್ಯತೆ ಪಡೆದ ಶಾಲೆಗಳಲ್ಲಿ ಮಾತ್ರ ಪರಿಗಣಿಸಲಾಗುವುದು ಮತ್ತು ಕಿರಿಯ ವೈದ್ಯಕೀಯ ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿ ಅಭ್ಯರ್ಥಿಗಳು ಡಿಪ್ಲೋಮಾ ಇನ್ ಲ್ಯಾಬೋರೇಟ್ರಿ ತಾಂತ್ರಿಕ ವಿದ್ಯಾರ್ಹತೆಯನ್ನು ಸರ್ಕಾರದಿಂದ ಮಾನ್ಯತೆ ಪಡೆದ ಶಾಲೆಗಳಲ್ಲಿ ಮಾತ್ರ ಪರಿಗಣಿಸಲಾಗುವುದು. 1:3 ರೋಷ್ಟರ್ ಕಂ ಮೆರಿಟ್ ನಲ್ಲಿ ಅರ್ಹ ಅಭ್ಯರ್ಥಿಗಳಿಗೆ ಮತ್ತು ಎರಡು ಸೆಟ್ ಜೆರಾಕ್ಸ್ ಪ್ರತಿಗಳೊಂದಿಗೆ ನಿಗದಿಪಡಿಸುವ ಸಮಯಕ್ಕೆ ಸಂದರ್ಶನಕ್ಕೆ ಹಾಜರಾಗುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಾಹನ ಒದಗಿಸಲು ಆಸಕ್ತರಿಂದ ಅರ್ಜಿ ಆಹ್ವಾನ

**ರಾಯಚೂರು ಜುಲೈ 06:** ರಾಷ್ಟ್ರೀಯ ಆರೋಗ್ಯ ಅಭಿಯಾನ ಯೋಜನೆಯಡಿಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಅಧೀನದಲ್ಲಿರುವ ಜಿಲ್ಲಾ ಕ್ಷಯರೋಗ ವಿಭಾಗದ ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿಗಳ 2026-27ನೇ ಸಾಲಿಗಾಗಿ ಸಂಚಾರಿ ಆರೋಗ್ಯ ಘಟಕ ತಾಲ್ಲೂಕು ಮಟ್ಟಕ್ಕೆ 4 ಬಾಡಿಗೆ 4 ಚಕ್ರದ ವಾಹನ ಒದಗಿಸಲು ಅರ್ಹ ಮಾಲೀಕರಿಂದ ಅರ್ಜಿ ಅಹ್ವಾನಿಸಲಾಗಿದೆ.

ಆಸಕ್ತರು ಜುಲೈ 13ರ ಸಂಜೆ 5ಗಂಟೆಯೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿಗಳನ್ನು ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿಗಳು ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಕ್ರಮ ಕ್ಲಿನಿಕ್‌ಗಳಿಗೆ ಅಧಿಕಾರಿಗಳ ಅಭಯಹಸ್ತವೇ? ಕ್ರಮ ಜರುಗಿಸದ ಟಿಎಚ್ಒ ವಿರುದ್ಧ ಜಿಲ್ಲಾಡಳಿತಕ್ಕೆ ದೂರು



**ಯಾದಗಿರಿ:** ಶಹಾಪುರ ನಗರದಲ್ಲಿ ನಿಯಮಬಾಹಿರವಾಗಿ ಕಾರ್ಯನಿರ್ವಹಿಸುತ್ತಿರುವ ಅಕ್ರಮ ಕ್ಲಿನಿಕ್‌ಗಳು ಹಾಗೂ ಅರ್ಹತೆ ಇಲ್ಲದ ವ್ಯಕ್ತಿಗಳಿಂದ ನಡೆಯುತ್ತಿರುವ ವೈದ್ಯಕೀಯ ಚಟುವಟಿಕೆಗಳ ವಿರುದ್ಧ ನಿರಂತರವಾಗಿ ದೂರುಗಳು ಸಲ್ಲಿಕೆಯಾಗುತ್ತಿದ್ದರೂ, ಸಂಬಂಧಪಟ್ಟ ಆರೋಗ್ಯ ಇಲಾಖೆ ಅಧಿಕಾರಿಗಳು ಯಾವುದೇ ಪರಿಣಾಮಕಾರಿ ಕ್ರಮ ಕೈಗೊಳ್ಳದೆ ನಿರ್ಲಕ್ಷ್ಯ ವಹಿಸುತ್ತಿರುವುದು ಸಾರ್ವಜನಿಕ ವಲಯದಲ್ಲಿ ತೀವ್ರ ಆತಂಕಕ್ಕೆ ಕಾರಣವಾಗಿದೆ.

ಈ ಹಿನ್ನೆಲೆದಲ್ಲಿ ತಾಲೂಕು ಆರೋಗ್ಯಾಧಿಕಾರಿ (ಟಿಎಚ್ಒ) ಅವರ ಕರ್ತವ್ಯ ಲೋಪ ಮತ್ತು ಆಡಳಿತಾತ್ಮಕ ವೈಫಲ್ಯವನ್ನು ಪ್ರಶ್ನಿಸಿ ನಮ್ಮ ಕರ್ನಾಟಕ ಸೇನೆ ತಾಲೂಕು ಘಟಕದ ಅಧ್ಯಕ್ಷ ಸಿದ್ದು ಪಟ್ಟೇದಾರ್ ಅವರು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗೆ ಸಮಗ್ರ ಲಿಖಿತ ದೂರು ಸಲ್ಲಿಸಿ ತಕ್ಷಣದ ಕ್ರಮಕ್ಕೆ ಆಗ್ರಹಿಸಿದ್ದಾರೆ.

ಮನವಿಯಲ್ಲಿ, ಶಹಾಪುರ ನಗರದಲ್ಲಿ ಕಾನೂನು ಉಲ್ಲಂಘಿಸಿ ಹಲವಾರು ಕ್ಲಿನಿಕ್‌ಗಳು ಕಾರ್ಯನಿರ್ವಹಿಸುತ್ತಿದ್ದು, ಸೂಕ್ತ ವೈದ್ಯಕೀಯ ಅರ್ಹತೆ ಇಲ್ಲದವರೇ ಸಾರ್ವಜನಿಕರಿಗೆ ಚಿಕಿತ್ಸೆ ನೀಡುತ್ತಿರುವ ಗಂಭೀರ ಆರೋಪ ಮಾಡಲಾಗಿದೆ. ಇಂತಹ ಅಕ್ರಮ ಚಟುವಟಿಕೆಗಳ ಕುರಿತು ಹಲವು ಬಾರಿ ದಾಖಲೆಗಳೊಂದಿಗೆ ದೂರು ಸಲ್ಲಿಸಿದರೂ, ಆರೋಗ್ಯ ಇಲಾಖೆ ಅಧಿಕಾರಿಗಳು ಪರಿಶೀಲನೆ ನಡೆಸುವುದಕ್ಕೂ ಮುಂದಾಗದೆ ಮೌನ ವಹಿಸಿರುವುದು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಅಕ್ರಮ ವೈದ್ಯಕೀಯ ಸೇವೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕಾದ ಅಧಿಕಾರಿಗಳೇ ಜಾಣ ಮೌನಕ್ಕೆ ಶರಣಾಗಿರುವುದರಿಂದ ನಿಯಮ ಉಲ್ಲಂಘಿಸುವವರಿಗೆ ಪರೋಕ್ಷ ರಕ್ಷಣೆ ದೊರೆಯುತ್ತಿರುವಂತಾಗಿದೆ. ಇದರ ಪರಿಣಾಮವಾಗಿ ಅಮಾಯಕ ಸಾರ್ವಜನಿಕರ ಆರೋಗ್ಯ ಮತ್ತು ಜೀವ ಭದ್ರತೆ ಗಂಭೀರ ಅಪಾಯಕ್ಕೆ ಸಿಲುಕಿದೆ ಎಂದು ಸಿದ್ದು ಪಟ್ಟೇದಾರ್ ಆತಂಕ ವ್ಯಕ್ತಪಡಿಸಿದ್ದಾರೆ.

ಈ ಕುರಿತು ತಾಲೂಕು ಆರೋಗ್ಯಾಧಿಕಾರಿಯನ್ನು ಸಂಪರ್ಕಿಸಿದಾಗ, ಮೇಲಧಿಕಾರಿಗಳ ಅನುಮತಿ ಹಾಗೂ ನಿರ್ದೇಶನ ಬಂದ ನಂತರವೇ ಕ್ರಮ ಜರುಗಿಸಲಾಗುವುದು ಎಂದು ಉತ್ತರ ನೀಡಿರುವುದಾಗಿ ಅವರು ತಿಳಿಸಿದ್ದಾರೆ. ಆದರೆ ಈ ರೀತಿಯ ಸ್ಪಂದನೆ ಅಧಿಕಾರಿಗಳ ಜವಾಬ್ದಾರಿಯುತ ಆಡಳಿತಕ್ಕೆ ವಿರುದ್ಧವಾಗಿದ್ದು, ಅಕ್ರಮ ವೈದ್ಯಕೀಯ ವ್ಯವಸ್ಥೆಗೆ ಉತ್ತೇಜನ ನೀಡಿದಂತಾಗಿದೆ ಎಂದು ಅವರು ಆರೋಪಿಸಿದ್ದಾರೆ.

ಸಾರ್ವಜನಿಕರ ಜೀವದೊಂದಿಗೆ ಚೆಲ್ಲಾಟ ನಡೆಸುತ್ತಿರುವ ಅಕ್ರಮಕ್ಲಿನಿಕ್‌ಗಳನ್ನು ತಕ್ಷಣ ಮುಚ್ಚಿಸಿ, ನಕಲಿ ವೈದ್ಯರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು. ಜೊತೆಗೆ ಕರ್ತವ್ಯ ನಿರ್ಲಕ್ಷ್ಯ ತೋರಿರುವ ಅಧಿಕಾರಿಗಳ ಪಾತ್ರದ ಬಗ್ಗೆಯೂ ಉನ್ನತ ಮಟ್ಟದ ತನಿಖೆ ನಡೆಸಿ ಸೂಕ್ತ ಶಿಸ್ತು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಡಳಿತವನ್ನು ಅವರು ಒತ್ತಾಯಿಸಿದ್ದಾರೆ.

ಆರೋಗ್ಯ ಇಲಾಖೆಯ ನಿರ್ಲಕ್ಷ್ಯ ಮುಂದುವರಿದಲ್ಲಿ ಜನಪರ ಸಂಘಟನೆಗಳೊಂದಿಗೆ ಹಂತ ಹಂತವಾಗಿ ತೀವ್ರ ಹೋರಾಟ ನಡೆಸಲಾಗುವುದು ಎಂದು ಸಿದ್ದು ಪಟ್ಟೇದಾರ್ ಎಚ್ಚರಿಕೆ ನೀಡಿದ್ದಾರೆ

# ಮುಖ್ಯಮಂತ್ರಿ ಜಿಲ್ಲೆಗೆ ಬೃಹತ್ ಕೈಗಾರಿಕೆ ಘೋಷಿಸಲಿ



**ಬೀದರ್:** ಮುಖ್ಯಮಂತ್ರಿಯಾದ ನಂತರ ಮೊದಲ ಬಾರಿಗೆ ಜುಲೈ 6 ರಂದು ಬೀದರಗೆ ಆಗಮಿಸುತ್ತಿರುವ ಡಿ.ಕೆ. ಶಿವಕುಮಾರ್ ಅವರು ಜಿಲ್ಲೆಯಲ್ಲಿ ಬೃಹತ್ ಕೈಗಾರಿಕೆ ಸ್ಥಾಪಿಸುವ ಘೋಷಣೆ ಮಾಡಬೇಕು ಎಂದು ಯುವ ಕೈಗಾರಿಕೋದ್ಯಮಿ ಪೃಥ್ವಿರಾಜ್ ಎಸ್. ಒತ್ತಾಯಿಸಿದ್ದಾರೆ.

ಜಿಲ್ಲೆಯಲ್ಲಿ ಸಾಕಷ್ಟು ನಿರುದ್ಯೋಗಿಗಳು ಇದ್ದಾರೆ. ಲಕ್ಷಾಂತರ ಜನರಿಗೆ ಉದ್ಯೋಗ ಒದಗಿಸುವ ಬೃಹತ್ ಕೈಗಾರಿಕೆ ಸ್ಥಾಪನೆ ಬಹಳ ಅಗತ್ಯವಿದೆ ಎಂದು ಹೇಳಿದ್ದಾರೆ.

ಕಲಬುರಗಿಯಲ್ಲಿ ಈಗಾಗಲೇ ರೂ. 700 ಕೋಟಿ ವೆಚ್ಚದಲ್ಲಿ ಜವಳಿ ಪಾರ್ಕ್ ಸ್ಥಾಪನೆಗೆ ಅನುಮೋದನೆ ನೀಡಲಾಗಿದೆ. ಬೀದರನಲ್ಲಿ ಎಸ್.ಇ.ಝಡ್ ಹಾಗೂ ಟೆಕ್ಸೈಲ್ ಪಾರ್ಕ್ ಸ್ಥಾಪಿಸಬೇಕು. ಕಲ್ಯಾಣ ಕರ್ನಾಟಕ ಪ್ರತ್ಯೇಕ ಸಚಿವಾಲಯ ಸ್ಥಾಪಿಸಬೇಕು. ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗೆ ಪ್ರತ್ಯೇಕ ಕೈಗಾರಿಕೆ ನೀತಿ ಜಾರಿಗೊಳಿಸಬೇಕು ಎಂದು ಬೇಡಿಕೆ ಮಂಡಿಸಿದ್ದಾರೆ.

## ಸಂವಿಧಾನದ 9ನೇ ಷೆಡ್ಯೂಲ್‌ಗೆ ಶೇ.56 ಮೀಸಲಾತಿ ಕಾಯ್ದೆ ಸೇರಿಸಿ, ಹೈಕೋರ್ಟನಲ್ಲಿನ ತಡೆಯಾಜ್ಞೆ ತೆರವುಗೊಳಿಸಲು ಪ್ರಯತ್ನಿಸಿ: ವಿ.ಎಸ್ ಉಗ್ರಪ್ಪ




**ಬೀದರ್: ಜು.6:**ಪರಿಶಿಷ್ಟ ಜಾತಿ (ಎಸ್‌ಸಿ) ಮತ್ತು ಪರಿಶಿಷ್ಟ ಪಂಗಡಗಳ (ಎಸ್‌ಟಿ) ಮೀಸಲಾತಿ ಪ್ರಮಾಣವನ್ನು ಹೆಚ್ಚಿಸಿ ಜಾರಿಗೆ ತರಲಾದ 56% ಮೀಸಲಾತಿ ಕಾಯ್ದೆಯನ್ನು ತಕ್ಷಣವೇ ಸಂವಿಧಾನದ 9ನೇ ಷೆಡ್ಯೂಲ್‌ಗೆ ಸೇರಿಸಬೇಕು ಹಾಗೂ ನಕಲಿ ಜಾತಿ ಪ್ರಮಾಣಪತ್ರ ಹಾವಳಿಯನ್ನು ತಡೆಗಟ್ಟಬೇಕು ಎಂದು ಕರ್ನಾಟಕ ರಾಜ್ಯ ವಾಲ್ಮೀಕಿ ಸಮಾಜದ ಸಮಾನ ಮನಸ್ಕರ ವೇದಿಕೆಯ ಅಧ್ಯಕ್ಷರು ಆಗಿರುವ ಮಾಜಿ ಸಂಸದವಿ.ಎಸ್ ಉಗ್ರಪ್ಪ ಒತ್ತಾಯಿಸಿದರು.

ಭಾನುವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ರಾಜ್ಯ ಹಾಗೂ ಕೇಂದ್ರ ಸರ್ಕಾರದ ನಿರ್ಲಕ್ಷ್ಯದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ನೀಡಬೇಕು ಎಂಬ ಸಂವಿಧಾನದ ಆಶಯದಂತೆ, ನ್ಯಾ. ನಾಗಮೋಹನದಾಸ್ ಹಾಗೂ ನ್ಯಾ. ಸುಭಾಷ ಆಡಿ ಆಯೋಗದ ವರದಿಗಳ ಆಧಾರದ ಮೇಲೆ ಎಸ್‌ಸಿ ಮೀಸಲಾತಿಯನ್ನು 15% ರಿಂದ 17%ಕ್ಕೆ ಮತ್ತು ಎಸ್‌ಟಿ ಮೀಸಲಾತಿಯನ್ನು 3% ರಿಂದ 7%ಕ್ಕೆ ಹೆಚ್ಚಿಸಿ 2022ರಲ್ಲಿ ಕಾಯ್ದೆ ಜಾರಿಗೆ ತರಲಾಯಿತು. ಈ ಕಾಯ್ದೆಯನ್ನು ಸಂವಿಧಾನದ 9ನೇ ಷೆಡ್ಯೂಲ್‌ಗೆ ಸೇರಿಸದ ಕಾರಣ ಇತ್ತೀಚೆಗೆ ಹೈಕೋರ್ಟ್ 56% ಮೀಸಲಾತಿಗೆ ತಡೆಯಾಜ್ಞೆ ನೀಡಿದೆ. ಇದರಿಂದಾಗಿ 2023-24 ಮತ್ತು 2024-25ನೇ ಸಾಲಿನಲ್ಲಿ ಶಿಕ್ಷಣ ಮತ್ತು ಉದ್ಯೋಗ ಪಡೆದ ಎಸ್‌ಸಿ, ಎಸ್‌ಟಿ ಮತ್ತು ಹಿಂದುಳಿದ ವರ್ಗದ ಜನರಿಗೆ ಭಾರೀ ಅನ್ಯಾಯವಾಗಿದೆ ಎಂದು ಹೇಳಿದರು.

ರಾಜ್ಯ ಸರ್ಕಾರ ಬೆಳಗಾವಿ ಅಧಿವೇಶನದಲ್ಲಿ ಈ ಸಂಬಂಧ ನಿರ್ಣಯ ಕೈಗೊಂಡರೂ, ಕೇಂದ್ರದ ಮೇಲೆ ಒತ್ತಡ ತರುವಲ್ಲಿ ವಿಫಲವಾಗಿದೆ ಎಂದು ಆರೋಪಿಸಿದರು.

ರಾಜ್ಯದಲ್ಲಿ ಲಕ್ಷಾಂತರ ಜನರು ಎಸ್‌ಸಿ ಮತ್ತು ಎಸ್‌ಟಿ ಹೆಸರಿನಲ್ಲಿ ನಕಲಿ ಜಾತಿ ಪ್ರಮಾಣ ಪತ್ರಗಳನ್ನು ಪಡೆದು ನೈಜ ಫಲಾನುಭವಿಗಳ ಸೌಲಭ್ಯಗಳನ್ನು ಕಬಳಿಸುತ್ತಿದ್ದಾರೆ. ಇದು ಈ ವರ್ಗಗಳ ಸಬಲೀಕರಣಕ್ಕೆ ಮಾರಕವಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಮೀಸಲಾತಿ ರಕ್ಷಣೆ ವಿಚಾರವಾಗಿ ರಾಜ್ಯ ಸರ್ಕಾರ ತಕ್ಷಣವೇ ಸರ್ವ ಪಕ್ಷಗಳ ಸಭೆ ಕರೆಯಬೇಕು, ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಸರ್ವ ಪಕ್ಷಗಳ ನಿಯೋಗವನ್ನು ದೆಹಲಿಗೆ ಕೊಂಡೊಯ್ದು ಪ್ರಧಾನ ಮಂತ್ರಿಗಳನ್ನು ಭೇಟಿಯಾಗಿ ಕಾಯ್ದೆಯನ್ನು 9ನೇ ಷೆಡ್ಯೂಲ್‌ಗೆ ಸೇರಿಸಲು ಒತ್ತಾಯಿಸಬೇಕು ಎಂದವರು ತಿಳಿಸಿದರು.

ಹೈಕೋರ್ಟ್ನಲ್ಲಿರುವ ತಡೆಯಾಜ್ಞೆ ತೆರವುಗೊಳಿಸಲು ಸಮರ್ಥ ವಕೀಲರನ್ನು ನೇಮಿಸಬೇಕು. ಒಂದು ವೇಳೆ ಅಲ್ಲಿ ತೆರವಾಗದಿದ್ದರೆ, ಸುಪ್ರೀಂ ಕೋರ್ಟ್ನಲ್ಲಿ ವಿಶೇಷ ಮೇಲ್ಮನವಿ (SLP) ಸಲ್ಲಿಸಬೇಕು ಎಂದರು.

ಎಸ್‌ಸಿ, ಎಸ್‌ಟಿ ಹಾಗೂ ಇತರೆ ಹಿಂದುಳಿದ ವರ್ಗಗಳ ಜನ ಪ್ರತಿನಿಧಿಗಳು ಮತ್ತು ನಾಯಕರ ತುರ್ತು ಸಭೆ ಕರೆದು ಮುಂದಿನ ರೂಪುರೇಷೆಗಳ ಬಗ್ಗೆ ಚರ್ಚಿಸಬೇಕು, ನಕಲಿ ಜಾತಿ ಪ್ರಮಾಣ ಪತ್ರ ಪಡೆದು ಸೌಲಭ್ಯ ಅನುಭವಿಸುತ್ತಿರುವವರ ಮೇಲೆ ಹಾಗೂ ಅಂತಹ ಸುಳ್ಳು ಪ್ರಮಾಣ ಪತ್ರಗಳನ್ನು ವಿತರಿಸುತ್ತಿರುವ ಭ್ರಷ್ಟ ಅಧಿಕಾರಿಗಳ ಮೇಲೆ ತಕ್ಷಣವೇ ಕ್ರಿಮಿನಲ್ ಪ್ರಕರಣ ದಾಖಲಿಸಿ ಕಠಿಣ ಕ್ರಮ ಜರುಗಿಸಬೇಕು. ರಾಜ್ಯದ ಎಲ್ಲಾ ಸಂಸದರು, ಶಾಸಕರು ಮತ್ತು ಸಚಿವರು ಒಗ್ಗಟ್ಟಿನಿಂದ ಕೇಂದ್ರ ಮತ್ತು ರಾಜ್ಯ ಸರ್ಕಾರದ ಮೇಲೆ ಒತ್ತಡ ತಂದು ಸಾಮಾಜಿಕ ನ್ಯಾಯವನ್ನು ಎತ್ತಿ ಹಿಡಿಯಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ರಾಜ್ಯ ವಾಲ್ಮೀಕಿ ಸಮಾಜದ ಸಮಾನ ಮನಸ್ಕರ ವೇದಿಕೆಯ ರಾಜ್ಯ ಕಾರ್ಯಾಧ್ಯಕ್ಷ ಎಂ.ನರಸಿಂಹಯ್ಯ, ರಾಜ್ಯ ಉಪಾಧ್ಯಕ್ಷ ರಾಜಣ್ಣ ಚಿತ್ರದುರ್ಗ, ಖಜಾಂಚಿ ರಾಜಪ್ಪ ಬೆಂಗಳೂರು, ರಾಯಚೂರು ಜಿಲ್ಲಾಧ್ಯಕ್ಷ ವೆಂಕಟೇಶ ನಾಯಕ ಅಸ್ಕಿಹಾಳ, ಜಿಲ್ಲಾ ಮಹಾಸಭಾ ಅಧ್ಯಕ್ಷ ದಶರಥ ಜಮಾದಾರ, ಯುವ ಘಟಕದ ಜಿಲ್ಲಾಧ್ಯಕ್ಷ ದಿಲೀಪ ಪಾಟೀಲ್, ಜೈಶ್ರೀ, ಪ್ರಕಾಶ ದೇಸಾಯಿ, ಭೂವಿ ಸಮಾಜದ ಶೈಲೇಶ, ವಾಲ್ಮೀಕಿ ನಾಯಕ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ್, ಗೌರವಾಧ್ಯಕ್ಷ ಮನೋಹರ್ ಕಂಟೆ, ಶರಣಪ್ಪ ಖಾಶೆಂಪುರ, ಷಣ್ಮುಖಪ್ಪ ಶೇಕಾಪುರ, ಸೇರಿದಂತೆ ಸಮಾಜದ ಹಲವು ಪ್ರಮುಖ ಮುಖಂಡರು ಉಪಸ್ಥಿತರಿದ್ದರು.

# "ಅಭಿ ಪಿಚ್ಚರ್ ಬಾಕಿ ಹೈ.." : ಗೃಹ ಸಚಿವ ಪ್ರಿಯಾಂಕ್ ಖರ್ಗೆ




**ಕಲಬುರಗಿ,ಜು.6**-ಆರ್‌ಎಸ್‌ಎಸ್‌ಗೆ ಬರೆದ ಪತ್ರಕ್ಕೆ ಇನ್ನೂ ಉತ್ತರ ಬಂದಿಲ್ಲ. ಬರಲಿ ಬಿಡಿ ಅವಸರ ಯಾಕೆ? ' ಅಭಿ ಪಿಚ್ಚರ್ ಬಾಕಿ ಹೈ' ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಕಲಬುರಗಿಯ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ತಮ್ಮನ್ನು ಭೇಟಿಯಾದ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡುತ್ತಿದ್ದ ಅವರು, ಹಲವಾರು ಪ್ರಶ್ನೆಗಳನ್ನು ಹಾಕಿ ಆರ್ ಎಸ್ ಎಸ್ ಗೆ ಪತ್ರ ಬರೆದಿದ್ದೇನೆ. ಇನ್ನೂ ಉತ್ತರ ನೀಡಿಲ್ಲ. ನೀಡಲಿ ಬಿಡಿ ಯಾಕೆ ಅವಸರ 'ಅಭೀ ಪಿಚ್ಚರ್ ಬಾಕಿ ಹೈ'. ಅವರೂ ಕೂಡಾ ನನ್ನ ಹಾಗೂ ಕುಟುಂಬದ ವೈಯಕ್ತಿಕ ಮಾಹಿತಿ ಕಲೆ ಹಾಕುತ್ತಿದ್ದಾರೆ, ಹಾಕಲಿ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸುತ್ತಾ ಹೇಳಿದರು.

ಮುಂದಿನ ದಿನಗಳಲ್ಲಿ ಆರ್ ಎಸ್ ಎಸ್ ಪಥ ಸಂಚಲನ ನಡೆಸಬೇಕಿದ್ದರೆ ಕಡ್ಡಾಯಾಗಿ ಅನುಮತಿ ಪಡೆದುಕೊಳ್ಳಲೇಬೇಕೇ ಎಂದು ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಗೃಹ ಸಚಿವರು, ನಾನು ಗೃಹ ಸಚಿವನಾಗಿರುವವರಗೆ ಕಡ್ಡಾಯ. ಆರ್ ಎಸ್ ಎಸ್ ನವರು ಇದೂವರೆಗೆ ಮಾಹಿತಿ ಮಾತ್ರ ನೀಡುತ್ತಿದ್ದರು. ಚಿತ್ತಾಪುರ ದಲ್ಲಿಯೂ ಹಾಗೆಯೇ ಮಾಡಿದರು. ಅನುಮತಿ ಕೊಡಲಿಲ್ಲ ಎಂದು ಕೋರ್ಟ್ ಗೆ ಹೋಗಿದ್ದರು. ಕೋರ್ಟ್ ನಿರ್ದೇಶನದಂತೆ ಅರ್ಜಿ ಸಲ್ಲಿಸಿದರು. ಇನ್ನು ಮುಂದೆಯೂ ಕೂಡಾ ಅವರು ಅರ್ಜಿಸಲ್ಲಿಸಿದರೆ, ಕೋರ್ಟ್ ನಿರ್ದೇಶನ ಹಾಗೂ ಸರ್ಕಾರದ ಮಾನದಂಡ, ಸ್ಥಳ, ಸಮಯ ಹಾಗೂ ಸಂದರ್ಭಕ್ಕನುಗುಣವಾಗಿ ಮುಂದಿನ ಕ್ರಮವಹಿಸಲಾಗುವುದು ಎಂದು ಸ್ಪಷ್ಟಪಡಿಸಿದರು.

ಆರ್ ಎಸ್ ಎಸ್ ಗುರುದಕ್ಷಿಣೆ ತೆಗೆದುಕೊಳ್ಳುತ್ತಾರಂತೆ. ಗುರು ಎಂದರೆ ಯಾರು ? ಧ್ವಜ ತಾನೆ ? ಧ್ವಜದ ಮೇಲೆ ಗುರುದಕ್ಷಿಣೆ ತೆಗೆದುಕೊಂಡರೆ, ಅದಕ್ಕೆ ಲೆಕ್ಕ ತೋರಿಸಲಿ ಎಂದು ಸವಾಲಾಕಿದರು.

ಶ್ರೀರಾಮನ ಹುಂಡಿ ಕಳ್ಳತನ ವಿಚಾರ ಪ್ರಸ್ತಾಪಿಸಿದ ಗೃಹ ಸಚಿವರು, ಬೆಳ್ಳಿ, ಚಿನ್ನ, ಆಭರಣ, ಹಣ ಸೇರಿದಂತೆ ಇಟ್ಟಿಗೆಗಳನ್ನು ಕೂಡಾ ಕಳವು ಮಾಡಿದ್ದಾರೆ. ಕರ್ನಾಟಕದ ಗಣೇಶ್ ಎನ್ನುವುವರು ಕಟ್ಟಡ ನಿರ್ಮಾಣ ಗುತ್ತಿಗೆ ಪಡೆದುಕೊಂಡಿದ್ದಾರಂತೆ, ಇಲ್ಲಿಂದ ಹೋಗಿ ಅಲ್ಲಿ ಕಮಿಷನ್ ಹೊಡೆದಿದ್ದಾರಂತೆ. ಶ್ರೀರಾಮ ವಿಗ್ರಹದ ಪ್ರಾಣ ಪ್ರತಿಷ್ಠಾನದ ವಿಚಾರದಲ್ಲಿ ಕೆಲವರು ವಿರೋಧ ಮಾಡಿದ್ದರು. ಆದರೂ ಮೋದಿ ತರಾತುರಿಯಲ್ಲಿ ಮಾಡಿದ್ದರು. ಚೆಂದಾ ಚೋರಿಯಲ್ಲಿ ಆರ್ ಎಸ್ ಎಸ್ ಗೂ ಪಾಲು ಹೋಗಿದ್ದರೆ ನನಗೆ ಅನುಮಾನವಿಲ್ಲ ಎಂದು ಆರೋಪಿಸಿದರು.

ಕೇಂದ್ರ ಸರ್ಕಾರದ ವಿದೇಶಾಂಗ ನೀತಿ ವಿಫಲವಾಗಿದೆ ಎಂದು ಟೀಕಿಸಿದ ಸಚಿವರು ಮೋದಿ ವಿದೇಶಾಂಗ ನೀತಿ ಇನಸ್ಟಾದಲ್ಲಿ ರೀಲ್ ಮಾಡಲು ಹಾಗೂ ಚಾಕೋಲೇಟ್ ವಿತರಣೆ ಮಾಡಲು ಮಾತ್ರ ಸೀಮಿತವಾಗಿದೆ. ಕಚ್ಚಾ ತೈಲ ಬೆಲೆ ಕಡಿಮೆಯಾಗಿದೆಯಲ್ಲ ಈಗೇಕೆ ಪೆಟ್ರೋಲಿಯಂ ಬೆಲೆ ಯಾಕೆ ಕಡಿಮೆ ಮಾಡುತ್ತಿಲ್ಲ ? ಎಂದು ಪ್ರಶ್ನಿಸಿದರು.

ರಾಜ್ಯ ಮಂತ್ರಿಮಂಡಲದಲ್ಲಿ ನಮ್ಮ ಕಲ್ಯಾಣ ಕರ್ನಾಟಕಕ್ಕೆ ಹೆಚ್ಚಿನ ಪ್ರಾತಿನಿಧ್ಯ ನೀಡುವಂತೆ ಹೈಕಮಾಂಡ್ ಮುಂದೆ ಬೇಡಿಕೆ ಇದ್ದೇ ಇರುತ್ತದೆ. ನಮ್ಮ ಭಾಗದಿಂದ ಯಾರೇ ಸಚಿವರಾದರೂ ಕೂಡಾ ಹೆಚ್ಚಿನ ಅಭಿವೃದ್ದಿಗೆ ಸಹಕಾರಿಯಾಗುತ್ತದೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸುತ್ತಾ ಹೇಳಿದರು.

ಆರ್ಟಿಕಲ್ 371 ಜೆ ಅಡಿಯಲ್ಲಿ ಗ್ರೇಡ್ 2 ತಹಸೀಲ್ದಾರಗಳ ಪದೋನ್ನತಿ ವಿಚಾರ, ಸಚಿವ ಸಂಪುಟದಲ್ಲಿ ಚರ್ಚೆ ನಡೆಸಲಾಗುವುದು. ಕಲಬುರಗಿ ಮಹಾನಗರ ಪಾಲಿಕೆ ಸೇರಿದಂತೆ ಸ್ಥಳೀಯ ಸಂಸ್ಥೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ವಾಟರ್ ಮೆನ್, ಬಿಲ್ ಕಲೆಕ್ಟರ್ ಗಳ ಖಾಯಮಾತಿ ವಿಚಾರದಲ್ಲಿಯೂ ಕೂಡಾ ಆರ್ಥಿಕ ಇಲಾಖೆಯೊಂದಿಗೆ ಚರ್ಚೆ ನಡೆಸಿ ಅಗತ್ಯ ಕ್ರಮವಹಿಸಲಾಗುವುದು ಎಂದರು.

ಡಬರಾಬಾದ್ ಬಳಿಯ ರೇಷ್ಮೆ ಇಲಾಖೆಯಕಟ್ಟಡದ ಕಳಪೆ ಕಾಮಗಾರಿ ವಿಚಾರ ಪ್ರಸ್ತಾಪಿಸದ್ದಕ್ಕೆ ಉತ್ತರಿಸಿದ ಸಚಿವರು ಮುಂದಿನ ವಾರ ಭೇಟಿ ನೀಡುತ್ತೇನೆ, ಕಳಪೆ ಆಗಿದ್ದರೆ ಕ್ರಮವಹಿಸಲಾಗುವುದು ಎಂದರು.

ದೀರ್ಘಾವಧಿ ಕಾಲ ಒಂದೇ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬಂಧಿಖಾನೆ ಇಲಾಖೆ ಹಾಗೂ ಗೃಹ ಇಲಾಖೆಯ ಸಿಬ್ಬಂದಿಗಳ ವರ್ಗಾವಣೆಗೆ ಸಂಬಂಧಿಸಿದಂತೆ ತರ್ಕಬದ್ಧ ನಿಯಮಾವಳಿ ಮೂಲಕ ಕ್ರಮವಹಿಸಲಾಗುವುದು. ಒಂದು ವೇಳೆ, ವರ್ಗಾವಣೆ ಮಾಡಿದರೆ, ಸಿಬ್ಬಂದಿಗಳು ಕೋರ್ಟ್ ಗೆ ಹೋಗುವ ಸಾಧ್ಯತೆ ಇರುವುದರಿಂದ ಕಾನೂನಿನ ಪ್ರಕಾರವೇ ವರ್ಗಾವಣೆಗೆ ಕ್ರಮ ಕೈಗೊಳ್ಳಲಾಗುವುದು ಎಂದರು.

ಲೋಕಾಯುಕ್ತ ಸಂಸ್ಥೆ ಸೇರಿದಂತೆ ಯಾವುದೇ ಸಂಸ್ಥೆಗಳು ಒಳ್ಳೆಯ ಸಲಹೆ ನೀಡಿದರೆ ಸ್ವೀಕರಿಸಲಾಗುವುದು ಎಂದ ಸಚಿವರು ನೂತನ ಪೊಲೀಸ್ ಠಾಣೆಗಳ ಸ್ಥಾಪನೆಗೆ ಕೇಂದ್ರದ ನಿಮಯಮಾವಳಿ ಪಾಲನೆ ಮಾಡಬೇಕಿರುತ್ತದೆ. ಯಾವುದೇ ಹೊಸ ಠಾಣೆ ಸ್ಥಾಪನೆಗೆ ಆಯಾ ಪ್ರದೇಶದ ಕ್ರೈಮ್ ಪರಿಗಣನೆಗೆ ಬರುತ್ತದೆ ಹೊರತು ವ್ಯಾಪ್ತಿ ಪ್ರದೇಶವಲ್ಲ. ಇದೇ ನಿಯಮಾವಳಿ ಪ್ರಕಾರ ಕಲಬುರಗಿ ಕಮಿಷನರೇಟ್ ಅಡಿಯಲ್ಲಿಯೂ ಕೂಡಾ ನೂತನ ಠಾಣೆಗಳ ಸ್ಥಾಪನೆಗೆ ಕ್ರಮವಹಿಸಲಾಗುವುದು ಎಂದರು.

ಬೆಂಗಳೂರಿನ ಕಲ್ಲು ಕ್ವಾರಿಯಂತೆ ಮಿರಿಯಾಣದಲ್ಲಿಯೂ ಕೂಡಾ ನಡೆಯುತ್ತಿದೆ ಎಂದು ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಸಚಿವರು ಕಲ್ಲು ಕ್ವಾರಿಗಳ ನಿರ್ವಹಣೆ, ಕ್ರಮಬದ್ಧತೆ ಹಾಗೂ ಅಕ್ರಮ ತಡೆ ವಿಚಾರ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ವ್ಯಾಪ್ತಿಗೆ ಬರುತ್ತದೆ. ಆದರೂ ನಮ್ಮ ಇಲಾಖೆಯ ಅಧಿಕಾರಿಗಳಿಗೆ ಈ ಬಗ್ಗೆ ಕಟ್ಟುನಿಟ್ಟಾಗಿ ಸೂಚಿಸಲಾಗಿದೆ ಎಂದು ಗೃಹ ಸಚಿವರು ಹೇಳಿದರು.

ಈ ಸಂದರ್ಭದಲ್ಲಿ ಶಾಸಕರಾದ ಜಗದೇವ ಗುತ್ತೇದಾರ, ಅಲ್ಲಮಪ್ರಭು ಪಾಟೀಲ್, ಕನೀಜ್ ಫಾತಿಮಾ, ತಿಪ್ಪಣ್ಣಪ್ಪ ಕಮಕನೂರು, ಪ್ರವೀಣ್ ಹರವಾಳ, ಸುಭಾಷ್ ರಾಠೋಡ, ರಾಜಗೋಪಾಲ ಮುದಿರೆಡ್ಡಿ ಸೇರಿದಂತೆ ಹಲವರಿದ್ದರು.

# ಶರಣಬಸವ ವಿಶ್ವವಿದ್ಯಾಲಯ ಹಾಗೂ ವಿಯೆಟ್ನಾಂನ ಇಂಡಸ್ಟ್ರಿಯಲ್ ವಿಶ್ವವಿದ್ಯಾಲಯ ನಡುವೆ ತಿಳುವಳಿಕೆ ಒಪ್ಪಂದಕ್ಕೆ ಸಹಿ




**ಕಲಬುರಗಿ: ಜು.6:**ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಅಂತರಾಷ್ಟ್ರೀಯ ಸಹಕಾರದ ಮೂಲಕ ಶೈಕ್ಷಣಿಕ ಅಭಿವೃದ್ಧಿಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಶರಣಬಸವ ವಿಶ್ವವಿದ್ಯಾಲಯವು ವಿಯೆಟ್ನಾಂನ ಹೋ ಚಿ ಮಿನ್ ಸಿಟಿಯ ಇಂಡಸ್ಟ್ರಿಯಲ್ ವಿಶ್ವವಿದ್ಯಾಲಯದೊಂದಿಗೆ ಸಂಶೋಧನೆ ಹಾಗೂ ಇತರೆ ಶೈಕ್ಷಣಿಕ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಐದು ವರ್ಷಗಳ ಅವಧಿಯ ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕಿದೆ.

ಈ ಒಡಂಬಡಿಕೆಗೆ ವಿಯೆಟ್ನಾಂನ ಇಂಡಸ್ಟ್ರಿಯಲ್ ವಿಶ್ವವಿದ್ಯಾಲಯದ ಡೇಟಾ ಸೈನ್ಸ್ ವಿಭಾಗದ ಮುಖ್ಯಸ್ಥ ಹಾಗೂ ಪ್ರಾಧ್ಯಾಪಕರಾದ ಡಾ. ಬುಯಿ ಥನ್ಹ್ ಹಂಗ್ ಹಾಗೂ ಶರಣಬಸವ ವಿಶ್ವವಿದ್ಯಾಲಯದ ಕುಲಸಚಿವರಾದ ಡಾ. ಲಕ್ಷ್ಮೀ ಪಾಟೀಲ ಮಾಕಾ ಸಹಿ ಹಾಕಿದರು.

ಈ ಸಂದರ್ಭದಲ್ಲಿ ಉಪಕುಲಪತಿ ಪ್ರೊ. ಅನಿಲಕುಮಾರ ಬಿಡವೆ, ಸಂಶೋಧನಾ ನಿರ್ದೇಶಕ ಪ್ರೊ. ವಿ. ಡಿ. ಮೈತ್ರಿ, ಮೌಲ್ಯಮಾಪನ ಕುಲಸಚಿವ ಡಾ. ಎಸ್. ಎಚ್. ಹೊನ್ನಳ್ಳಿ, ಸಂಶೋಧನಾ ಡೀನ್ ಡಾ. ಸುಜಾತಾ ಮಲ್ಲಾಪುರ ಹಾಗೂ ಡೀನ್ ಡಾ. ಶಿವಕುಮಾರ ಜವಳಿಗಿ ಉಪಸ್ಥಿತರಿದ್ದರು. ಬಳಿಕ ಡಾ. ಬುಯಿ ಥನ್ಹ್ ಹಂಗ್ ಹಾಗೂ ಶರಣಬಸವ ವಿಶ್ವವಿದ್ಯಾಲಯದ ಕುಲಸಚಿರಾದ ಡಾ. ಲಕ್ಷ್ಮೀ ಪಾಟೀಲ್ ಮಕಾ ಅವರು ಸಹಿ ಮಾಡಲಾದ ತಿಳುವಳಿಕೆ ಒಪ್ಪಂದ ಪತ್ರಗಳನ್ನು ಪರಸ್ಪರ ವಿನಿಮಯ ಮಾಡಿಕೊಂಡರು.

ಐದು ವರ್ಷಗಳ ಅವಧಿಯ ಈ ಒಡಂಬಡಿಕೆಯು ಎರಡೂ ವಿಶ್ವವಿದ್ಯಾಲಯಗಳ ನಡುವಿನ ಶೈಕ್ಷಣಿಕ, ವೈಜ್ಞಾನಿಕ ಹಾಗೂ ಸಾಂಸ್ಕೃತಿಕ ಸಹಕಾರವನ್ನು ಉತ್ತೇಜಿಸುವ ಹಾಗೂ ಮತ್ತಷ್ಟು ಬಲಪಡಿಸುವ ಉದ್ದೇಶ ಹೊಂದಿದೆ. ಪರಸ್ಪರ ಆಸಕ್ತಿಯ ಕ್ಷೇತ್ರಗಳಲ್ಲಿ ಜಂಟಿ ಸಂಶೋಧನಾ ಚಟುವಟಿಕೆಗಳು, ಸಂಯುಕ್ತ ಸಂಶೋಧನಾ ಯೋಜನೆಗಳನ್ನು ಕೈಗೊಳ್ಳುವುದು ಹಾಗೂ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಸಂಸ್ಥೆಗಳಿಂದ ಜಂಟಿಯಾಗಿ ಸಂಶೋಧನಾ ಅನುದಾನ ಪಡೆಯಲು ಅವಕಾಶಗಳನ್ನು ಅನ್ವೇಷಿಸುವುದು ಇದರ ಪ್ರಮುಖ ಅಂಶಗಳಾಗಿವೆ.

ಇದರ ಜೊತೆಗೆ ಸಂಶೋಧನಾ ಲೇಖನಗಳು, ಪುಸ್ತಕಗಳು ಹಾಗೂ ಸಮ್ಮೇಳನಗಳ ಸಂಶೋಧನಾ ಪ್ರಬಂಧಗಳನ್ನು ಜಂಟಿಯಾಗಿ ಪ್ರಕಟಿಸುವುದು, ಪದವಿ, ಸ್ನಾತಕೋತ್ತರ ಹಾಗೂ ಪಿಎಚ್.ಡಿ. ವಿದ್ಯಾರ್ಥಿಗಳಿಗೆ ಅಲ್ಪಾವಧಿ ಹಾಗೂ ದೀರ್ಘಾವಧಿಯ ವಿನಿಮಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು, ಇಂಟರ್‌ಶಿಪ್, ಪ್ರಾಜೆಕ್ಟ್ ಕಾರ್ಯಗಳು ಹಾಗೂ ಸಂಶೋಧನಾ ಭೇಟಿಗಳಿಗೆ ಉತ್ತೇಜನ ನೀಡುವುದು ಕೂಡ ಈ ಒಡಂಬಡಿಕೆಯ ಭಾಗವಾಗಿದೆ. ಬೋಧನೆ, ಸಂಶೋಧನೆ ಹಾಗೂ ಇತರೆ ಶೈಕ್ಷಣಿಕ ಚಟುವಟಿಕೆಗಳಿಗಾಗಿ ಅಧ್ಯಾಪಕರ ಪರಸ್ಪರ ವಿನಿಮಯಕ್ಕೂ ಇದರಲ್ಲಿ ಅವಕಾಶ ಕಲ್ಪಿಸಲಾಗಿದೆ.

ಇದಲ್ಲದೆ, ಜಂಟಿಯಾಗಿ ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಸಮ್ಮೇಳನಗಳು, ವಿಚಾರ ಸಂಕಿರಣಗಳು, ಕಾರ್ಯಾಗಾರಗಳು, ಸಿಂಪೊಸಿಯಂಗಳು ಮತ್ತು ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸುವುದು, ಶೈಕ್ಷಣಿಕ ಕಾರ್ಯಕ್ರಮಗಳು ಹಾಗೂ ಸಾಮರ್ಥ್ಯ ವೃದ್ಧಿ ಉಪಕ್ರಮಗಳಲ್ಲಿ ಪರಸ್ಪರ ಸಹಕಾರ ವಹಿಸುವುದಕ್ಕೂ ಈ ತಿಳುವಳಿಕೆ ಒಪ್ಪಂದ ಅವಕಾಶ ಒದಗಿಸುತ್ತದೆ. ಸಂಯುಕ್ತ ಚಟುವಟಿಕೆಗಳಿಂದ ಉಂಟಾಗುವ ಬೌದ್ಧಿಕ ಆಸ್ತಿ ಹಕ್ಕುಗಳ ಕುರಿತು ಈ ಒಡಂಬಡಿಕೆಯಲ್ಲಿ ಸ್ಪಷ್ಟವಾಗಿ ಉಲ್ಲೇಖಿಸಲಾಗಿದ್ದು, ಲಿಖಿತ ರೂಪದಲ್ಲಿ ಒಪ್ಪಂದವಾಗದ ಹೊರತು, ಅಂತಹ ಬೌದ್ಧಿಕ ಆಸ್ತಿಯು ಎರಡೂ ವಿಶ್ವವಿದ್ಯಾಲಯಗಳ ಜಂಟಿ ಮಾಲೀಕತ್ವದಲ್ಲಿರಲಿದೆ ಎಂದು ತಿಳಿಸಲಾಗಿದೆ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE